ಆನೆ ಮತ್ತು ಚಿರತೆಗಳ ದಾಳಿ

2012 (2642); ಶ್ರೀ ಬಾಲಕೃಷ್ಣ ಹೆಚ್.ಸಿ (ಮಾಗಡಿ)

ಅ) ಕಳೆದ 3 ವರ್ಷಗಳಲ್ಲಿ ಮಾಗಡಿ ತಾಲ್ಲೂಕಿನಲ್ಲಿ ಆನೆ ಮತ್ತು ಚಿರತೆಗಳು ದಾಳಿ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಆನೆ ದಾಳಿಯಿಂದ ಎಷ್ಟು ಜನ ಮೃತಪಟ್ಟಿದ್ದಾರೆ ಮತ್ತು ಎಷ್ಟು ಬೆಳೆ ನಾಶವಾಗಿದೆ; ಆನೆ ದಾಳಿಯಿಂದ ಮೃತಪಟ್ಟವರಿಗೆ ಮತ್ತು ಬೆಳೆ ನಾಶಕ್ಕೆ (ರಾಗಿ, ಭತ್ತ, ಬಾಳೆ, ತೆಂಗು, ಅಡಿಕೆ, ಮಾವು ನಿಗಧಿಪಡಿಸಿರುವ ಪರಿಹಾರವೆಷ್ಟು; (ಬೆಳೆಗಳ ಪರಿಹಾರವೆಷ್ಟು ಬೆಳೆಗಳ ಪರಿಹಾರದ ಪ್ರತ್ಯೇಕ ಮಾಹಿತಿ ನೀಡುವುದು)

ಇ) ಪರಿಹಾರವನ್ನು ಯಾವ ವರ್ಷದಲ್ಲಿ ನಿಗದಿಪಡಿಸಲಾಗಿದೆ; ಪರಿಹಾರದ ಮೊತ್ತವನ್ನು ಏರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಈ) ಆನೆ ಮತ್ತು ಚಿರತೆಗಳ ದಾಳಿಯನ್ನು ತಪ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು?

ಶ್ರೀ ಬಿ. ರಮಾನಾಥ್ ರೈ (ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಹೌದು.

ಆ) ಆನೆ ದಾಳಿಯಿಂದ ಮೃತಪಟ್ಟ ಹಾಗೂ ಬೆಳೆಹಾನಿಯ ಸಂಬಂಧ ನೀಡಲಾದ ಪರಿಹಾರದ ವಿವರ.

ಕ್ರ ಸಂ	ವರ್ಷ	ಮಾಗಡಿ ವಲಯ			
		ಮೃತಪಟ್ಟವರ ಸಂಖ್ಯೆ	ಪರಿಹಾರದ ಮೊತ್ತ	ಬೆಳೆ ನಷ್ಟದ ವಿವರ	ಪರಿಹಾರದ ಮೊತ್ತ
1	2011–12	–	–	272	399960
	2012–13	1	500000	551	3608704
	2013–14	1	500000	290	4114821

ಸರ್ಕಾರದ ಪತ್ರ ಸಂಖ್ಯೆ: ಅಪಜೀ 162 ಎಫ್‌ಡಬ್ಲ್ಯುಎಲ್ 2008, ದಿನಾಂಕ: 05/06/2009ರಲ್ಲಿ ವಿವಿಧ ಬೆಳಗಳಿಗೆ ನಿಗಧಿಪಡಿಸಿರುವ ದರದಂತೆ ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010, ಬೆಂಗಳೂರು ದಿನಾಂಕ: 30-04-2011 ಮತ್ತು ಸರ್ಕಾರದ ಆದೇಶ ಸಂಖ್ಯೆ:ಅಪಜೀ 109 ಎಫ್‌ಎಪಿ 2014, ದಿನಾಂಕ: 13/08/2014ಗಳನ್ವಯ ರೈತರಿಗೆ ದಯಾತ್ಮಕ ಧನವನ್ನು ನೀಡಲಾಗುತ್ತಿದೆ.

ಇ) ಸರ್ಕಾರವು ಆಗಿಂದಾಗ್ಗೆ ನಿಗಧಿಪಡಿಸಿರುವ ದಯಾತ್ಮಕ ಧನದ ಮೊತ್ತವನ್ನು ಪರಿಷ್ಕರಿಸಿ ಆದೇಶ ಹೊರಡಿಸುತ್ತದೆ. ಇತ್ತೀಚೆಗೆ ಸರ್ಕಾರವು ವನ್ಯಪ್ರಾಣಿಗಳಿಂದ ಉಂಟಾದ ಬೆಳೆ ನಾಶ ಮತ್ತು ಸಾಕು ಪ್ರಾಣಿ ಹತ್ಯೆ ಪ್ರಕರಣಗಳಿಗೆ ನೀಡಲಾಗುತ್ತಿದ್ದ ದಯಾತ್ಮಕ ಧನದ ಮೊತ್ತವನ್ನು ಪರಿಷ್ಕರಿಸಿ ಸರ್ಕಾರದ ಆದೇಶ ಸಂಖ್ಯೆ: ಅಪಜೀ-109-ಎಫ್‌ಎಪಿ-2014, ದಿನಾಂಕ: 13/08/2014ರನ್ವಯ ಆದೇಶ ಹೊರಡಿಸಿರುತ್ತದೆ.

ಈ) ಕಾಡಾನೆಗಳ ಹಾವಳಿಯ ನಿಯಂತ್ರಣಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

1. ಕಾಡಾನೆಗಳು ಅರಣ್ಯ ಪ್ರದೇಶದಿಂದ ಪಕ್ಕದ ಕೃಷಿ ಹಾಗೂ ಸಾರ್ವಜನಿಕರ ಸ್ಥಳಗಳಲ್ಲಿ ದಾಳಿ ಮಾಡುವುದನ್ನು ತಡೆಗಟ್ಟುವ ಸಲುವಾಗಿ ಸೂಕ್ಷ್ಮ ಪ್ರದೇಶಗಳ ಅರಣ್ಯದ ಅಂಚಿನಲ್ಲಿ ಕಾಡಾನೆ ನಿರೋಧಕ ಕಂದಕ ಮತ್ತು ಸೌರಶಕ್ತಿ ಬೇಲಿ ನಿರ್ಮಿಸಿ ನಿರ್ವಹಿಸಲಾಗುತ್ತಿದೆ.
2. ಕಾಡಾನೆಗಳು ಪದೇ ಪದೇ ಕೃಷಿ ಜಮೀನುಗಳಿಗೆ ದಾಳಿ ಮಾಡುವ ಸೂಕ್ಷ್ಮ ಸ್ಥಳಗಳನ್ನು ಗುರುತಿಸಿ ಹಾವಳಿ ನಡೆಸುವ ಕಾಡಾನೆಗಳನ್ನು ಪುನಃ ಕಾಡಿಗೆ ಹಿಮ್ಮೆಟ್ಟಿಸುವ ಸಲುವಾಗಿ ಕಾಡಾನೆ ತಡೆ ತಂಡಗಳನ್ನು ರಚಿಸಿ, ಪ್ರತಿಯೊಂದು

ತಂಡದಲ್ಲೂ ಸ್ಥಳೀಯರ ಜೊತೆಗೆ ನಾಲ್ಕು ಮಂದಿ ಅರಣ್ಯ ಸಿಬ್ಬಂದಿಗಳನ್ನು ನಿಯೋಜಿಸಿ ಕ್ರಮಕ್ಕೈಗೊಳ್ಳಲಾಗುತ್ತಿದೆ.

3. ಸದರಿ ಸಿಬ್ಬಂದಿಗಳಿಗೆ ವಾಕೀ–ಟಾಕೀ, ಗನ್ ಹಾಗೂ ವಾಹನಗಳ ಸೌಲಭ್ಯಗಳನ್ನು ಕಾಡಾನೆಗಳನ್ನು ಅರಣ್ಯ ಪ್ರದೇಶಗಳಿಗೆ ಹಿಮ್ಮೆಟ್ಟಿಸಲು ಒದಗಿಸಲಾಗುತ್ತಿದೆ.
4. ಸಿಬ್ಬಂದಿಗಳಿಗೆ ಪಟಾಕಿ ಇನ್ನಿತರ ಸಾಮಗ್ರಿಗಳನ್ನು ಒದಗಿಸಿ, ಹಾವಳಿ ನಡೆಸುವ ಕಾಡಾನೆಗಳನ್ನು ಅರಣ್ಯ ಪ್ರದೇಶಗಳಿಗೆ ಹಿಮ್ಮೆಟ್ಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ
5. ಕಾಡಾನೆಗಳ ಹಾವಳಿ ಹೆಚ್ಚಾಗಿ ಕಂಡುಬರುವ ಸೂಕ್ಷ್ಮ ಪ್ರದೇಶಗಳಲ್ಲಿ ಅವಶ್ಯಕತೆಗನುಗುಣವಾಗಿ Rapid Response Teams (RRT) ಗಳನ್ನು ಅಂದರೆ ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನೇ Rapid Response Teams (RRT) ತಂಡಗಳನ್ನಾಗಿಸಿ, ಕಾಡಾನೆಗಳ ಹಾವಳಿಯನ್ನು ನಿಯಂತ್ರಿಸಲಾಗುತ್ತಿದೆ.
6. ಕಾಡಾನೆ ಹಾವಳಿ ಕಂಡುಬದಾಗ ಕೂಡಲೇ ಕ್ರಮ ಕೈಗೊಳ್ಳುವ ಸಂಬಂಧ ಕೇಂದ್ರ ಸ್ಥಾನದಲ್ಲಿ 24 ಗಂಟೆಗಳ ಕಾಲ ಸೇವೆ ಒದಗಿಸುವ ಸಲುವಾಗಿ ಶುಲ್ಕ ರಹಿತ ಸೇವಾ ಸಂಖ್ಯೆ (Toll Free Number)ನ್ನು ಅನುಷ್ಠಾನಗೊಳಿಸಲಾಗಿದೆ. Toll Free Number – 1800 425 1314.
7. ಕಾಡಾನೆಗಳ ದಾಳಿಯ ಸಮಯದಲ್ಲಿ ಏನನ್ನು ಮಾಡಬೇಕು ಮತ್ತು ಮಾಡಬಾರದು ಎಂಬುದರ ಬಗ್ಗೆ ಸಾರ್ವಜನಿಕರಲ್ಲಿ ಸೂಚನಾ ಫಲಕದ ಹಾಗೂ ಗ್ರಾಮಸ್ಥರೊಂದಿಗೆ ಸಭೆಯನ್ನು ನಡೆಸುವ ಮುಖಾಂತರ ಜಾಗೃತಿಯನ್ನು ಮೂಡಿಸಲಾಗುತ್ತಿದೆ.
8. ಕಾಡಾನೆಗಳಿಂದ ಬೆಳೆಹಾನಿ ಹಾಗೂ ಮಾನವ ಪ್ರಾಣ ಹಾನಿ ಆಗಿರುವುದಕ್ಕೆ ಕ್ರಮವಾಗಿ ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯುಎಲ್ 2010, ದಿನಾಂಕ: 30.04.2011,

ಅಪಜೀ 143 ಎಫ್‌ಡಬ್ಲ್ಯುಎಲ್ 12010, ದಿನಾಂಕ: 03.08.2011ರ ಮತ್ತು ಸರ್ಕಾರದ ಆದೇಶ ಸಂಖ್ಯೆ: ಅಪಜೀ 109 ಎಫ್‌ಎಪಿ 2014, ದಿನಾಂಕ: 13/08/2014ರನ್ವಯ ಪ್ರಕಾರ ದಯಾತ್ಮಕ ಧನವನ್ನು ಪಾವತಿಸಿ ಕ್ರಮಕೈಗೊಳ್ಳಲಾಗಿದೆ.

9. ಕಾಡಾನೆಗಳ ಅರಣ್ಯ ಪ್ರದೇಶಗಳ ಒಳಗೆ ನೀರಿನ ಸೌಕರ್ಯವನ್ನು ಸತತವಾಗಿ ಒದಗಿಸಿ, ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ.
10. ಅರಣ್ಯ ಪ್ರದೇಶಗಳಲ್ಲಿ ಕಾಡಾನೆಗಳಿಗೆ ವರ್ಷವಿಡೀ ಕುಡಿಯುವ ನೀರು ದೊರಕುವಂತೆ ಅರಣ್ಯದಲ್ಲಿರುವ ಕೆರೆಗಳ ಹೂಳುತೆಗೆಯುವುದು. ಗಲ್ಲಿಪ್ಲಗ್, ಚೆಕ್‌ಡ್ಯಾಮ್, ನಾಲಾಬಂಡ್, ಇತ್ಯಾದಿ ಕೆಲಸಗಳನ್ನು ರಕ್ಷಿತಾರಣ್ಯಗಳಲ್ಲಿ ತೆಗೆದು ಕೊಳ್ಳಲಾಗುತ್ತಿದೆ.
11. ಅರಣ್ಯ ಪ್ರದೇಶ ವ್ಯಾಪ್ತಿಯಲ್ಲಿ ಕಾಡು ಪ್ರಾಣಿ/ಕಾಡಾನೆಗಳಿಂದ ಉಂಟಾಗುವ ಪ್ರಾಣಹಾನಿ, ಬೆಳೆಹಾನಿ ತಡೆಯಲು ಮೇಲ್ಕಂಡಂತೆ ರಕ್ಷಣಾ ಕ್ರಮಗಳನ್ನು ಕೈಗೊಳ್ಳುವುದರ ಜೊತೆಗೆ,
12. 2014–15ನೇ ಸಾಲಿಗೆ ರೈತರು ಬೆಳೆದ ಬೆಳೆಗಳನ್ನು ರಕ್ಷಿಸಲು ಅರಣ್ಯ ಇಲಾಖೆ ಮತ್ತು ಗ್ರಾಮಸ್ಥರ ಸಹಯೋಗದೊಂದಿಗೆ ಸಹಾಯಧನ ರೂಪದಲ್ಲಿ 50:50 ಆಧಾರದಲ್ಲಿ ಸೌರಶಕ್ತಿ ಬೇಲಿಯನ್ನು ನಿರ್ಮಾಣ ಮಾಡುವ ಕಾರ್ಯ ಕೈಗೊಳ್ಳಲಾಗುತ್ತಿದೆ.
13. ರಾಜ್ಯದಲ್ಲಿ ಆನೆಗಳ ಸಂಖ್ಯೆ ಅಧಿಕವಾಗಿರುವ ಪ್ರದೇಶಗಳಲ್ಲಿ ಮಾನವ ಆನೆ ಸಂಘರ್ಷವನ್ನು ಪರಿಣಾಮಕಾರಿಯಾಗಿ ತಡೆಯುವ ಸಲುವಾಗಿ ಉಪಯೋಗಿಸಿ ಬಿಟ್ಟ ರೈಲ್ವೆ ಹಣವನ್ನು ಬಳಸಿಕೊಂಡು ಅರಣ್ಯಗಳ ಸುತ್ತ ಬ್ಯಾರಿಕೇಡನ್ನು ನಿರ್ಮಾಣ ಮಾಡುವ ಕಾರ್ಯವನ್ನು ಹಮ್ಮಿಕೊಳ್ಳಲಾಗುತ್ತಿದೆ.

ಚಿರತೆಗಳ ಹಾವಳಿಯ ನಿಯಂತ್ರಣಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಚಿರತೆ ಹಾವಳಿ ತಡೆಗಟ್ಟಲು ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಮುಂಜಾಗ್ರತಾ ಕ್ರಮವಾಗಿ ತಮ್ಮ ತಮ್ಮ ವಿಭಾಗಗಳಲ್ಲಿ 3–4 ಜನರನ್ನೊಳಗೊಂಡ ರಕ್ಷಣಾ ಪಡೆಯನ್ನು ರಚಿಸಿ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನಸಂಪರ್ಕ ಸಭೆ ನಡೆಸಲು ಹಾಗೂ ಮುಂಜಾಗ್ರತಾ ಕ್ರಮವಾಗಿ ಹಾವಳಿ ಇರುವ ಕಡೆ ರಾತ್ರಿ ಗಸ್ತು ಮಾಡಲು ಮತ್ತು ಚಿರತೆ ಹಿಡಿಯಲು ಬೇಕಾದ ಬೋನು, Tranquilizer Gun ಮತ್ತಿತರೆ ಉಪಕರಣಗಳನ್ನು ಸಿದ್ದತೆ ಮಾಡಿಕೊಂಡಿರುತ್ತಾರೆ. ಅಲ್ಲದೆ ನಿರಂತರವಾಗಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ವಲಯ ಅರಣ್ಯಾಧಿಕಾರಿಗಳು ಸಾರ್ವಜನಿಕರಿಗೆ ತಿಳುವಳಿಕೆ ನೀಡುವುದಲ್ಲದೇ, ಅದರಲ್ಲೂ ಕಾಡಂಚಿನಲ್ಲಿ ವಾಸಿಸುವ ಜನರಿಗೆ ಹೆಚ್ಚಿನ ತಿಳುವಳಿಕೆ ನೀಡುವಂತೆ ರಾಜ್ಯದ ಎಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಶ್ರೀರಂಗ ಏತ ನೀರಾವರಿ ಯೋಜನೆಗಳು

2013 (2643); ಶ್ರೀ ಹೆಚ್.ಸಿ. ಬಾಲಕೃಷ್ಣ

ಅ) ಹೇಮಾವತಿ ನದಿಯಿಂದ ಮಾಗಡಿಗೆ ನೀರು ಹರಿಸುವ ಶ್ರೀರಂಗ ಏತ ನೀರಾವರಿ ಯೋಜನೆಯ ಟೆಂಡರ್ ಪ್ರಕ್ರಿಯೆ ನಿಧಾನಗತಿ ಆಗಲು ಕಾರಣವೇನು;

ಆ) ಈ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಅನುದಾನವೆಷ್ಟು; ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ;

ಇ) ಕಾಮಗಾರಿಯ ಪ್ರಾರಂಭವನ್ನು ಯಾವಾಗ ಮಾಡಲಾಗುವುದು; ಯಾವ ಕಾಲಮಿತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?